***<u>ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ಕೊಪ್ಪ</u>***

***<u>ಸಿ.ಸಿ. ನಂಃ 773/2019</u>***

***<u>ಫಿರ್ಯಾದುದಾರರು</u>*** ಃ ಶ್ರೀ. ಜಿ.ಪಿ. ಶ್ರೀನಿವಾಸ ಗೌಡ, ಬಿನ್. ಪುಟ್ಟೇಗೌಡ,
70 ವರ್ಷ, ವಾಸಃ ಅರನೂರು, ದೇವಗೋಡು ಗ್ರಾಮ,
ಸಿ.ಆರ್.ಎಸ್. ಅಂಚೆ, ಕೊಪ್ಪ ತಾಲ್ಲೂಕು,
ಚಿಕ್ಕಮಗಳೂರು ಜಿಲ್ಲೆ.

ಃವಿಃ

***<u>ಆರೋಪಿತರು</u>*** ಃ ಶ್ರೀ. ಎನ್.ಎಸ್. ಶಿವಮೂರ್ತಿ, ಬಿನ್. ಶೇಷಣ್ಣಗೌಡ,
ಸುಮಾರು 50 ವರ್ಷ, ನಂದಿಗೋಡು,
ಹರಿಹರಪುರ ಹೋಬಳಿ, ಕೊಪ್ಪ ತಾಲ್ಲೂಕು.

- - -

***<u>ಆ ಪಾ ದ ನೆ</u>***

ಆರೋಪಿಯಾದ ನಿಮ್ಮ ವಿರುದ್ಧ ಫಿರ್ಯಾದುದಾರರು ದಾಖಲು ಮಾಡಿರುವ ಫಿರ್ಯಾದು ಏನೆಂದರೆ, ನೀವು ಆರೋಪಿ 2,00,000/- ರೂ.ಗಳ 26.2.2019ನೇ ದಿನಾಂಕವನ್ನು ನಮೂದಿಸಿರುವ, 059611ನೇ ಸಂಖ್ಯೆಯ, ಕರ್ನಾಟಕ ಬ್ಯಾಂಕ್ (ನಿ), ಹರಿಹರಪುರ ಶಾಖೆಯ ಒಂದು ಚೆಕ್ಕನ್ನು ಫಿರ್ಯಾದುದಾರರಿಗೆ ಕೊಡಬೇಕಾದ ಹಣದ ಬಾಬ್ತು ನಗದೀಕರಣಕ್ಕಾಗಿ ನೀಡಿದ್ದು, ಫಿರ್ಯಾದುದಾರರು ಅದನ್ನು ಜಮಾವಣೆಗಾಗಿ ಬ್ಯಾಂಕಿನಲ್ಲಿ ಹಾಜರುಪಡಿಸಿದಾಗ, ಬ್ಯಾಂಕಿನವರು ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣವಿಲ್ಲವೆಂಬ ಹಿಂಬರಹದೊಂದಿಗೆ ಅದನ್ನು ವಾಪಾಸು ಮಾಡಿರುತ್ತಾರೆ ಹಾಗೂ ಈ ಬಗ್ಗೆ ನಿಮಗೆ ವಕೀಲರ ಮೂಲಕ ನೋಟೀಸನ್ನು ಕೊಟ್ಟರೂ ಸಹಾ ನೀವು ಆರೋಪಿ ಚೆಕ್ಕಿನಲ್ಲಿ ಒಳಗೊಂಡ ಹಣವನ್ನು ಮರುಪಾವತಿ ಮಾಡಿರುವುದಿಲ್ಲ, ಆದ್ದರಿಂದ,

ನೀವು ಆರೋಪಿ ಫಿರ್ಯಾದುದಾರರಿಗೆ ಮೋಸ ಮಾಡಬೇಕೆನ್ನುವ ಉದ್ದೇಶದಿಂದ ಈ ರೀತಿಯ ಚೆಕ್ಕನ್ನು ನೀಡಿ ವರ್ಗಾವಣೀಯ ಲಿಖಿತ ಕಾಯ್ದೆ ಕಲಂ 138ರ ಪ್ರಕಾರ ಶಿಕ್ಷಾರ್ಹವಾದ ಅಪರಾಧವನ್ನು ಎಸಗಿರುತ್ತೀರಿ.

ಪ್ರಃ1ಃ ಈಗ ಓದಿ ಹೇಳಿದ ಆಪಾದನೆ ತಿಳಿಯಿತೇ?

ಉಃ ತಿಳಿಯಿತು

ಪ್ರಃ2ಃ ತಪ್ಪು ಒಪ್ಪಿಕೊಳ್ಳುತ್ತೀರೋ ಅಥವಾ ವಿಚಾರಣೆ ಆಗಬೇಕಾ?

ಉಃ ತಪ್ಪು ಮಾಡಿಲ್ಲ, ವಿಚಾರಣೆ ಆಗಬೇಕು

ಈ ಮೇಲ್ಕಂಡ ಆಪಾದನೆಯನ್ನು ನಾನೇ ಸ್ವತಃ ಆರೋಪಿಗೆ ಓದಿ ಹೇಳಿ, ಅವರು ಕೊಟ್ಟ ಉತ್ತರವನ್ನು ಬರೆದುಕೊಂಡಿದ್ದು, ಮೇಲೆ ಹೇಳಿರುವುದು ಸತ್ಯ ಹಾಗೂ ಸರಿಯಾಗಿದೆ ಎಂದು ದೃಢೀಕರಿಸುತ್ತೇನೆ.

ದಿನಾಂಕಃ 8ನೇ ದಿವಸ, ಮಾರ್ಚಿ ಮಾಹೆ, 2021.

ಸಹಿ.... 8.3.2021
(ಕಂಚಿ ಮಾಯಣ್ಣ ಗೌತಮ್)
ಸಿವಿಲ್ ನ್ಯಾಯಾಧೀಶರು ಮತ್ತು
ಪ್ರದನ್ಯಾದಂ;ಕೊಪ್ಪ.